**All India Radio: Bangalore**
**Regional Bulletin In Kannada**
**22.06.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**22.06.2025 / 2.30 p.m.**
**<><><><>**

ಮುಖ್ಯಾಂಶಗಳು

1. ರಾಜ್ಯ ಸರ್ಕಾರ ಸಹಕಾರ ನೀಡಿದರೆ ಮಂಡ್ಯ ಭಾಗದಲ್ಲಿ ಕೈಗಾರಿಕೆ ಸ್ಥಾಪನೆ-ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ
2. ೨೦೨೮ರ ಹೊತ್ತಿಗೆ ಭಾರತ ಜಗತ್ತಿನ ಮೂರನೇ ಅತೀ ದೊಡ್ಡ ಆರ್ಥಿಕ ರಾಷ್ಟ್ರ- ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಆಶಯ
3. ಸೀಬರ್ಡ್ ನೌಕಾನೆಲೆ ಯೋಜನೆಯಡಿ ಭೂಮಿ ಕಳೆದುಕೊಂಡಿದ್ದ ಭೂಮಾಲೀಕರಿಗೆ ಪರಿಹಾರ ಮೊತ್ತ ವಿತರಣೆ
4. ಮಲ್ಲಾಬಾದಿ ಏತ ನೀರಾವರಿ ಯೋಜನೆ ಕಾಮಗಾರಿಗೆ ರಾಜ್ಯ ಸರ್ಕಾರದಿಂದ ಅನುದಾನ ಮಂಜೂರು-ಸಚಿವ ಶರಣಬಸಪ್ಪ ದರ್ಶನಾಪುರ

<><><><>

ರಾಜ್ಯದ ಮಂಡ್ಯ ಸೇರಿದಂತೆ ಅಕ್ಕ-ಪಕ್ಕ ಜಿಲ್ಲೆಯಲ್ಲಿ ಬೃಹತ್ ಕಾರ್ಖಾನೆಗಳನ್ನು ತರುವ ಮೂಲಕ ಉದ್ಯೋಗ ಸೃಷ್ಟಿ ಮಾಡಲು ಚಿಂತನೆ ನಡೆಸಿದ್ದು, ಇದಕ್ಕೆ ರಾಜ್ಯ ಸರ್ಕಾರದ ಸಹಕಾರ ಅಗತ್ಯವಾಗಿ ಬೇಕಾಗಿದೆ ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ. ಮಂಡ್ಯ ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಿರುದ್ಯೋಗ ಸಮಸ್ಯೆ ಮಂಡ್ಯ ಭಾಗದ ಯುವಕರನ್ನು ಕಾಡುತ್ತಿದೆ. ಈ ಬಗ್ಗೆ ಸಾಕಷ್ಟು ಯುವಕರು ಅಹವಾಲು ಸಲ್ಲಿಸಿದ್ದಾರೆ. ರಾಜ್ಯ ಸರ್ಕಾರ ಪ್ರೋತ್ಸಾಹ ನೀಡಿದರೆ, ಮಂಡ್ಯ ಜಿಲ್ಲೆಗೆ ಅಗತ್ಯ ಕೈಗಾರಿಕೆ ತರುವುದಾಗಿ ಭರವಸೆ ನೀಡಿದರು. ಕೈಗಾರಿಕೆ ಇಲಾಖೆಯಲ್ಲಿ ಬೇರೆ ರೀತಿಯ ಸಾಕಷ್ಟು ಕೆಲಸಗಳಿವೆ. ಆದರೆ ಈ ಭಾಗದಲ್ಲಿ ಕಾರ್ಖಾನೆ ಸ್ಥಾಪಿಸಲು ರಾಜ್ಯ ಸರ್ಕಾರ ಸಹಕಾರ ನೀಡಿ, ಹೂಡಿಕೆದಾರರಿಗೆ ಪ್ರೋತ್ಸಾಹ ನೀಡದರೆ, ಕಾರ್ಖಾನೆ ತರುವುದು ಸುಲಭ ಎಂದು ಎಚ್.ಡಿ.ಕುಮಾರಸ್ವಾಮಿ ಹೇಳಿದರು.

**ಧ್ವನಿ - ಹೆಚ್.ಡಿ.ಕುಮಾರಸ್ವಾಮಿ, ಕೇಂದ್ರ ಸಚಿವ**

<><><><>

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ, ಕಳೆದ ೧೧ ವರ್ಷದಲ್ಲಿ ದೇಶವನ್ನು ಅಭಿವೃದ್ಧಿಯ ಪಥದತ್ತ ಕೊಂಡೊಯ್ಯುವ ಮೂಲಕ ಜಗತ್ತಿನ ೫ನೇ ಆರ್ಥಿಕ ಶಕ್ತಿಯನ್ನಾಗಿಸಿದೆ. ೨೦೨೭-೨೮ರ ಹೊತ್ತಿಗೆ ಭಾರತ ಜಗತ್ತಿನ ೩ನೇ ಅತೀ ದೊಡ್ಡ ಆರ್ಥಿಕ ರಾಷ್ಟ್ರವಾಗಿ ಹೊರಹೊಮ್ಮಲಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಆಶಯ ವ್ಯಕ್ತಪಡಿಸಿದ್ದಾರೆ. ಹುಬ್ಬಳ್ಳಿಯ ಶ್ರೀನಿವಾಸ್ ಗಾರ್ಡನ್ ಸಭಾ ಭವನದಲ್ಲಿಂದು ಭಾರತ ಸಂಕಲ್ಪ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ರಕ್ಷಣೆ, ವಿಮಾನಯಾನ, ಮೊಬೈಲ್ ಉತ್ಪಾದನೆ, ಇಂಟರ್‌ನೆಟ್, ಆರೋಗ್ಯ ಕ್ಷೇತ್ರ, ಕಲ್ಲಿದ್ದಲು, ಗಣಿಕಾರಿಗೆ ಸೇರಿದಂತೆ ಎಲ್ಲ ಕ್ಷೇತ್ರದಲ್ಲಿಯೂ ಭಾರತ ಅಭಿವೃದ್ಧಿ ಸಾಧಿಸುತ್ತಿದೆ ಎಂದರು. ೨೦೪೭ರಲ್ಲಿ ವಿಕಸಿತ ಹಾಗೂ ಅಭಿವೃದ್ಧಿ ಹೊಂದಿದ ಭಾರತ ಆಗಬೇಕು ಎಂಬುದು ಪ್ರಧಾನಿ ನರೇಂದ್ರ ಮೋದಿಯವರ ಸಂಕಲ್ಪವಾಗಿದೆ ಎಂದು ಸಚಿವ ಪ್ರಹ್ಲಾದ್ ಜೋಶಿ ಹೇಳಿದರು.

**ಧ್ವನಿ : ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ**

<><><>

ಸೀಬರ್ಡ್ ನೌಕಾನೆಲೆ ಯೋಜನೆಯಡಿ ಭೂಮಿ ಕಳೆದುಕೊಂಡಿದ್ದ ೫೭ ಭೂ-ಮಾಲೀಕರಿಗೆ ಹೆಚ್ಚುವರಿ ಪರಿಹಾರದ ಮೊತ್ತ ೧೦ ಕೋಟಿ ೪೭ ಲಕ್ಷ ರೂಪಾಯಿಗಳನ್ನು ರಾಜ್ಯ ಬಂದರು, ಒಳನಾಡು ಜಲಸಾರಿಗೆ ಸಚಿವ ಮಂಕಾಳ ವೈದ್ಯ ವಿತರಿಸಿದರು. ಕಾರವಾರದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಂತ್ರಸ್ತ ಭೂ-ಮಾಲೀಕರ ಬ್ಯಾಂಕ್ ಖಾತೆಗಳಿಗೆ ನೇರ ಹಣ ವರ್ಗಾವಣೆ ಮಾಡಿದ ಸಚಿವರು, ನೌಕಾನೆಲೆಗೆ ಅಗತ್ಯವಿರುವ ಜಮೀನು ಮತ್ತು ಎಲ್ಲಾ ರೀತಿಯ ವ್ಯವಸ್ಥೆಯನ್ನು ಕಾರವಾರ ತಾಲೂಕಿನ ಜನತೆ ಕಲ್ಪಿಸಿ, ನೌಕಾನೆಲೆ ನಿರ್ಮಿಸಲು ಸಹಕಾರ ನೀಡಿದ್ದಾರೆ ಎಂದು ಹೇಳಿದರು. ಪ್ರಸ್ತುತ ಹೆಚ್ಚುವರಿ ಪರಿಹಾರದ ಮೊತ್ತ ೧೦ ಕೋಟಿ ೪೭ ಲಕ್ಷ ರೂಪಾಯಿ ಮಾತ್ರ ಬಂದಿದ್ದು, ಇನ್ನೂ ಕೇಂದ್ರ ಸರ್ಕಾರದಿಂದ ೬೦ ಕೋಟಿ ರೂಪಾಯಿಗಳ ಪರಿಹಾರ ಬಿಡುಗಡೆಯಾಗಬೇಕಿದ್ದು, ಶೀಘ್ರದಲ್ಲಿ ಬಿಡುಗಡೆಯಾಗುವ ನೀರಿಕ್ಷೆಯಿದೆ ಎಂದರು. ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಮಾತನಾಡಿ, ಜಿಲ್ಲೆಯ ಜನರ ತ್ಯಾಗದಿಂದ ಸೀಬರ್ಡ್ ಯೋಜನೆ ಜಾರಿಯಾಗಿದೆ. ಇನ್ನು ನಿರಾಶ್ರಿತರ ಪುನರ್ವಸತಿ ಕೇಂದ್ರದ ಸುಧಾರಣೆಗೆ ಪ್ರಯತ್ನ ಮಾಡಲಾಗುವುದು ಎಂದು ಹೇಳಿದರು.

<><><>

ಯಾದಗಿರಿ ಜಿಲ್ಲೆಯ ಶಹಾಪುರ ತಾಲೂಕಿನ ಸನ್ನತಿ ಕಾಲುವೆ ಮೂಲಕ ೭೦ ಕೋಟಿ ರೂಪಾಯಿ ವೆಚ್ಚದಲ್ಲಿ ಶಹಾಪುರ ನಗರಕ್ಕೆ ಶಾಶ್ವತ ಕುಡಿಯುವ ನೀರಿನ ಯೋಜನೆ ಕಾಮಗಾರಿ ಪೂರ್ಣಗೊಂಡಿದೆ. ಶೀಘ್ರದಲ್ಲಿ ಮುಖ್ಯಮಂತ್ರಿಗಳು ಕಾಮಗಾರಿ ಉದ್ಘಾಟಿಸಲಿದ್ದಾರೆ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯ ಶಹಾಪುರ ತಾಲೂಕಿನ ಹುರಸಗುಂಡಗಿ ಗ್ರಾಮದ ಬಳಿ ಭೀಮಾ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಸನ್ನತಿ ಬ್ರಿಜ್ ಕಂ ಬ್ಯಾರೇಜ್ ಕಾಮಗಾರಿ ಪರಿಶೀಲಿಸಿ ಅವರು ಮಾತನಾಡಿದರು. ೮೬ ಕೋಟಿ ರೂಪಾಯಿ ವೆಚ್ಚದಲ್ಲಿ ನಗರದ ಪ್ರತಿ ಮನೆಗೆ ನಿರಂತರ ನೀರು ಸರಬರಾಜು ಮಾಡುವ ಪೈಪ್ ಕೆಲಸ ಭರದಿಂದ ಸಾಗಿದೆ. ಕಾಮಗಾರಿ ಪೂರ್ಣಗೊಂಡರೆ ನಗರಕ್ಕೆ ನಿರಂತರ ದಿನದ ೨೪ ನೀರು ಲಭಿಸಲಿದೆ ಎಂದರು. ೩೫೬ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಮಲ್ಲಾಬಾದಿ ಏತ ನೀರಾವರಿ ಯೋಜನೆ ಕಾಮಗಾರಿಗೆ ಅನುದಾನ ಮಂಜೂರಾತಿ ದೊರೆತಿದೆ. ಇದರಿಂದ ರೈತರಿಗೆ ಮತ್ತಷ್ಟು ಅನುಕೂಲವಾಗಲಿದೆ ಎಂದು ಅವರು ಹೇಳಿದರು. ೩೦ ಕೋಟಿ ರೂಪಾಯಿ ವೆಚ್ಚದಲ್ಲಿ ಮೊರಾರ್ಜಿ ವಸತಿ ಶಾಲೆ ಕಟ್ಟಡ, ಸಗರ ಗ್ರಾಮದಲ್ಲಿ ೨೧ ಕೋಟಿ ರೂಪಾಯಿ ವೆಚ್ಚದಲ್ಲಿ ಅಂಬೇಡ್ಕರ್ ವಸತಿ ಶಾಲೆ, ೯ ಕೋಟಿ ರೂಪಾಯಿ ವೆಚ್ಚದಲ್ಲಿ ಅಲ್ಪಸಂಖ್ಯಾತ ಬಾಲಕಿಯರ ಮತ್ತು ಬಾಲಕರ ವಸತಿ ನಿಲಯ, ೧೬ ಕೋಟಿ ರೂಪಾಯಿ ವೆಚ್ಚದಲ್ಲಿ ಪ್ರಜಾಸೌಧ ನಿರ್ಮಾಣ ಕಾಮಗಾರಿಗೆ ಶೀಘ್ರದಲ್ಲಿ ಚಾಲನೆ ನೀಡಲಾಗುವುದು ಎಂದು ಸಚಿವ ಶರಣಬಸಪ್ಪ ದರ್ಶನಾಪುರ ಮಾಹಿತಿ ನೀಡಿದರು.

<><><>

೨೦೨೫ರ ಮುಂಗಾರು ಹಂಗಾಮಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ವಿಮಾ ಯೋಜನೆಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕೃಷಿ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಪ್ರಕೃತಿ ವಿಕೋಪದಿಂದ ಬೆಳೆ ನಷ್ಟ ಸಂಭವಿಸಿದರೆ, ರೈತರಿಗೆ ಪರಿಹಾರ ನೀಡುವ ಮೂಲಕ ಆರ್ಥಿಕ ಭದ್ರತೆ ಒದಗಿಸುವ ದೃಷ್ಟಿಯಿಂದ ವಿಮೆ ಯೋಜನೆ ಜಾರಿಗೆ ತರಲಾಗಿದೆ. ಜಿಲ್ಲೆಯಲ್ಲಿ ಮುಖ್ಯ ಬೆಳೆಯಾಗಿ ರಾಗಿ, ಭತ್ತ, ಮುಸುಕಿನಜೋಳ, ತೊಗರಿ, ನೆಲಗಡಲೆ, ಹುರುಳಿ ಮತ್ತು ಟೊಮ್ಯಾಟೋ ಬೆಳೆಗಳನ್ನು ಇತರೆ ಬೆಳೆಗಳಾಗಿ ಅಧಿಸೂಚಿಸಲಾಗಿದೆ. ಟೊಮ್ಯಾಟೋ ಮತ್ತು ತೊಗರಿ ಬೆಳೆಗೆ ಜುಲೈ ೧೫, ನೆಲಗಡಲೆ ಬೆಳೆಗೆ ಜುಲೈ ೩೧ ಹಾಗೂ ಉಳಿದಂತೆ ರಾಗಿ, ಭತ್ತ, ಮುಸುಕಿನ ಜೋಳ ಮತ್ತು ಹುರುಳಿ ಬೆಳೆಗಳಿಗೆ ಆಗಸ್ಟ್ ೧೬ ರವರೆಗೆ ವಿಮೆಗೆ ನೋಂದಾಯಿಸಲು ಕೊನೆಯ ದಿನಾಂಕವಾಗಿದೆ. ಆಸಕ್ತ ರೈತರು ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ತಮ್ಮ ಹತ್ತಿರದ ರೈತ ಸಂಪರ್ಕ ಕೇಂದ್ರಗಳು,

ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಅಥವಾ ವಿಮಾ ಸಂಸ್ಥೆಯ ಪ್ರತಿನಿಧಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಕೃಷಿ ಇಲಾಖೆಯ ಜಿಲ್ಲಾ ಜಂಟಿ ಕೃಷಿ ನಿರ್ದೇಶಕಿ ಬಿ.ಜಿ.ಕಲಾವತಿ ತಿಳಿಸಿದ್ದಾರೆ.

<><><><>

ಮಳೆಗಾಲ ಪ್ರಾರಂಭವಾಗಿರುವುದರಿಂದ ಎದುರಾಗಬಹುದಾದ ತುರ್ತು ಪರಿಸ್ಥಿತಿ, ಪ್ರವಾಹ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಮುನ್ನೆಚ್ಚರಿಕೆಯಾಗಿ ಸನ್ನದ್ಧರಾಗಿರುವಂತೆ ಅಧಿಕಾರಿಗಳಿಗೆ ವಿಜಯಪುರ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚನೆ ನೀಡಿದ್ದಾರೆ. ವಿಜಯಪುರದ ಜಿಲ್ಲಾಧಿಕಾರಿಗಳ ಕೇಸ್ವಾನ್ ಕಚೇರಿಯ ಸಭಾಂಗಣದಲ್ಲಿ ಪ್ರವಾಹ ಪರಿಸ್ಥಿತಿ ನಿಯಂತ್ರಣಕ್ಕೆ ನಿಯೋಜಿಸಲಾದ ನೋಡಲ್ ಅಧಿಕಾರಿಗಳು ಹಾಗೂ ತಹಸೀಲ್ದಾರ್‌ಗಳು, ಕಾರ್ಯನಿರ್ವಾಹಕ ಅಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು. ಪ್ರವಾಹ ಪರಿಸ್ಥಿತಿಯನ್ನು ಎಲ್ಲ ರೀತಿಯಲ್ಲಿ ನಿರ್ವಹಣೆಗೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಜನ-ಜಾನುವಾರುಗಳ ರಕ್ಷಣೆ, ಪುರ್ನವಸತಿ, ಪರಿಹಾರ ಕೇಂದ್ರಗಳ ಸ್ಥಾಪನೆ ಸೇರಿದಂತೆ ಮುಂಜಾಗ್ರತೆಯಾಗಿ ಎಲ್ಲ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಅವರು ನಿರ್ದೇಶಿಸಿದರು. ಪ್ರವಾಹ ಪರಿಸ್ಥಿತಿ ನಿಯಂತ್ರಣಕ್ಕಾಗಿ ನೇಮಕ ಮಾಡಲಾದ ನೋಡಲ್ ಅಧಿಕಾರಿಗಳು, ಸಂಬಂಧಿಸಿದ ತಾಲೂಕುಗಳಿಗೆ ಭೇಟಿ ನೀಡಿ, ಗ್ರಾಮಗಳ ಪರಿಸ್ಥಿತಿಯನ್ನು ಅವಲೋಕಿಸಬೇಕು. ಪ್ರತಿ ವಾರಕ್ಕೊಮ್ಮೆ ಸಭೆ ನಡೆಸಿ, ತಾಲೂಕುಗಳಲ್ಲಿ ನಡೆದ ಸಭೆಗಳ ಮಾಹಿತಿಯನ್ನು ಜಿಲ್ಲಾಡಳಿತದ ಗಮನಕ್ಕೆ ತರಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

<><><><>

ಯಾದಗಿರಿ ಜಿಲ್ಲೆಯ ಹುಣಸಗಿ ತಾಲೂಕಿನ ನಾರಾಯಣಪುರ ಗ್ರಾಮದ ಬಸವಸಾಗರ ಜಲಾಶಯದಿಂದ ನದಿಗೆ ಹರಿಸುವ ನೀರಿನ ಪ್ರಮಾಣದಲ್ಲಿ ಇಳಿಮುಖವಾಗಿದೆ. ಇಂದು ಬೆಳಗ್ಗೆ ಬಸವಸಾಗರ ಜಲಾಶಯದ ೧೪ ಕ್ರಸ್ಟ್ ಗೇಟ್‌ಗಳ ಮುಖಾಂತರ ೪೨ ಸಾವಿರದ ೮೨೦ ಕ್ಯುಸೆಕ್ ನೀರನ್ನು ಕೃಷ್ಣಾ ನದಿಗೆ ಹರಿಸಲಾಗುತ್ತಿದೆ. ಮುರುಡೇಶ್ವರ ವಿದ್ಯುತ್ ಉತ್ಪಾದನಾ ಘಟಕದ ಮುಖಾಂತರ ೬ ಸಾವಿರ ಕ್ಯುಸೆಕ್ ನೀರನ್ನು ಹರಿಸಲಾಗುತ್ತಿದೆ ಎಂದು ಜಲಾಶಯಯ ಉಪವಿಭಾಗದ ಸಹಾಯಕ ಎಂಜಿನಿಯರ್ ವಿಜಯಕುಮಾರ್ ಅರಳಿ ಮಾಹಿತಿ ನೀಡಿದ್ದಾರೆ.

<><><><>

ಕೇಂದ್ರ ಸರ್ಕಾರದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ೨೦೨೪-೨೫ನೇ ಸಾಲಿನಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ಆರು ಖರೀದಿ ಕೇಂದ್ರಗಳಲ್ಲಿ ರಾಗಿ ಖರೀದಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದೆ ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>